# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD North/LP/0278/2017-18 ದಿನಾಂಕ: 23-05-2019.

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಖಾತಾ ಸಂಖ್ಯೆ. 97/95/97, ವಾರ್ಡ್ ನಂ. 05, ತಿರುಮೇನಹಳ್ಳಿ ಗ್ರಾಮ, ಯಲಹಂಕ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 4 ಮತ್ತು 5 ರಲ್ಲಿನ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 28-01-2019

2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/LP/0278/2017-18, ದಿನಾಂಕ: 09-07-2018.

* * * * * * *

ಆಸ್ತಿ ಖಾತಾ ಸಂಖ್ಯೆ. 97/95/97, ವಾರ್ಡ್ ನಂ. 05, ತಿರುಮೇನಹಳ್ಳಿ ಗ್ರಾಮ, ಯಲಹಂಕ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 4 ಮತ್ತು 5 ರಲ್ಲಿನ ತಳಮಹಡಿ ಹಾಗೂ ಭಾಗಶಃ 2ನೇ ಸಾಮಾನ್ಯ ತಳಮಹಡಿ ಒಳಗೊಂಡಂತೆ ನೆಲ+ಮೇಲಿನ 4 ಅಂತಸ್ತುಗಳ 288 ವಸತಿ ಘಟಕಗಳು ಮತ್ತು 28 EWS ಘಟಕಗಳನ್ನೊಳಗೊಂಡಂತೆ ಒಟ್ಟಾರೆ 316 ಘಟಕಗಳು ಮತ್ತು ಬಿಲ್ಡಿಂಗ್ – 1, 2 & 3 ರಲ್ಲಿ ಒಟ್ಟು 365 ಘಟಕಗಳು ಒಳಗೊಂಡಂತೆ ಒಟ್ಟಾರೆ 681 ಘಟಕಗಳಿರುವ ವಸತಿ ಸಮುಚ್ಚಯ ಕಟ್ಟಡಗಳ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 09-07-2018 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ.

ಮಂಜೂರಾದ ಕಟ್ಟಡಗಳ ಪೈಕಿ ಬಿಲ್ಡಿಂಗ್ – 4 ಮತ್ತು 5 ರಲ್ಲಿನ ತಳಮಹಡಿ ಹಾಗೂ ಭಾಗಶಃ 2ನೇ ಸಾಮಾನ್ಯ ತಳಮಹಡಿ ಒಳಗೊಂಡಂತೆ ನೆಲ+ಮೇಲಿನ 4 ಅಂತಸ್ತುಗಳ 288 ವಸತಿ ಘಟಕಗಳು ಮತ್ತು 28 EWS ಘಟಕಗಳನ್ನೊಳಗೊಂಡಂತೆ ಒಟ್ಟಾರೆ 316 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಗಳ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 09-04-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. 3,05,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000076 ದಿನಾಂಕ: 21-05-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ಕಟ್ಟಡಗಳ ಪೈಕಿ ಬಿಲ್ಡಿಂಗ್ – 4 ಮತ್ತು 5 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಬಿಲ್ಡಿಂಗ್ - 1, 2 & 3 ರ ವಸತಿ ಸಮುಚ್ಚಯ ನಿರ್ಮಾಣವನ್ನು ಮಂಜೂರಾತಿ ನಕ್ಷೆಯಂತೆ ಪ್ರಾರಂಭಿಸಿ ಪ್ರಾರಂಭಿಕ ಪ್ರಮಾಣಪತ್ರ ಪಡೆದ ನಂತರವೇ ಈ ಕಟ್ಟಡಗಳ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.
3. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
5. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
6. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ -ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

Brigade Enterprises Ltd., (GPA Holders)
# 29th & 30th Floors, World Trade Center,
Brigade Gateway Campus, 26/1,
Dr. Rajkumar Road, Malleshwaram,
Rajajinagar, Bangalore-560055.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಯಲಹಂಕ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

o/c

B. R. Muddaki 23/5/19

ಜಂಟಿ ನಿರ್ದೇಶಕರು (ನಗರ ಯೋಜನೆ -ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/5/19 23/5/19 23/5/19